# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ಮಂಜುನಾಥ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಅಮ್ಮನಘಟ್ಟ ಗ್ರಾಮ ಪಂಚಾಯಿತಿ, ಗುಬ್ಬಿ ತಾಲ್ಲೂಕು, ತುಮಕೂರು ಜಿಲ್ಲೆ ಇವರ ವಿರುದ್ಧ ನಡೆಸಲಾದ ಇಲಾಖಾ ವಿಚಾರಣೆ-ಅಂತಿಮ ಆದೇಶ ಹೊರಡಿಸುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/437/ಗ್ರಾಪಂಕಾ/2017, ದಿನಾಂಕ:05.06.2017.
2. ಅಪರ ನಿಬಂಧಕರು, ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ:UPLOK-2/DE/843/2017/ARE-12, Date:01.07.2019.
3. ಮಾನ್ಯ ಉಪಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ: UPLOK-2/DE/843/2017/ARE-12, Date:03.07.2019.
4. ಎರಡನೇ ಕಾರಣ ಕೇಳುವ ನೋಟೀಸ್ ಸಂಖ್ಯೆ: ಗ್ರಾಅಪ 437 ಗ್ರಾಪಂಕಾ 2017, ದಿನಾಂಕ:04.09.2019.
5. ಆಪಾದಿತ ನೌಕರರು ಎರಡನೇ ಕಾರಣ ಕೇಳುವ ನೋಟೀಸ್‌ಗೆ ಸಲ್ಲಿಸಿರುವ ಸಮಜಾಯಿಷಿ ದಿನಾಂಕ:26.11.2019.

**ಪ್ರಸ್ತಾವನೆ :**

ಮೇಲೆ ಓದಲಾದ ಕ್ರಮ ಸಂಖ್ಯೆ: (1) ರ ಸರ್ಕಾರದ ಆದೇಶದಲ್ಲಿ ಶ್ರೀ ಮಂಜುನಾಥ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಅಮ್ಮನಘಟ್ಟ ಗ್ರಾಮ ಪಂಚಾಯಿತಿ, ಗುಬ್ಬಿ ತಾಲ್ಲೂಕು, ತುಮಕೂರು ಜಿಲ್ಲೆ ಇವರ ವಿರುದ್ಧದ ಆರೋಪಗಳ ಬಗ್ಗೆ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14-ಎ ಅಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಗಿತ್ತು.

**ದೋಷಾರೋಪಣೆ"**

ತುಮಕೂರು ಜಿಲ್ಲೆ, ಗುಬ್ಬಿ ತಾಲ್ಲೂಕು, ಅಮ್ಮನಘಟ್ಟ ಗ್ರಾಮ ಪಂಚಾಯಿತಿ, ವ್ಯಾಪ್ತಿಗೆ ಬರುವ ಅಮ್ಮನಘಟ್ಟ ಗ್ರಾಮದ ಖಾತಾ ನಂಬರ್ 46,48,150 ಮತ್ತು ಚನ್ನಶೆಟ್ಟಿ ಹಳ್ಳಿ ಗ್ರಾಮದ ಖಾತಾ ನಂಬರ್ 175 ರಲ್ಲಿನ ವಿಸ್ತೀರ್ಣ 30/40 ಅಡಿಯುಳ್ಳ ನಿವೇಶನವಿದ್ದು, ದೂರುದಾರರ ಪತಿ ಸುಮಾರು 20 ವರ್ಷಗಳ ಹಿಂದೆ ಮರಣ ಹೊಂದಿದ್ದು, ಪಾವತಿ ಖಾತೆಯ ಆಧಾರದ ಮೇಲೆ ಖಾತಾ ಪಹಣಿ ಮಾಡಲು ಎದುರುದಾರರಿಗೆ ಅರ್ಜಿ ಸಲ್ಲಿಸಿದ್ದು, ಶ್ರೀ ಮಂಜುನಾಥ್ ರವರು ಖಾತಾ ಬದಲಾವಣೆ ಮಾಡಿಕೊಂಡುವುದಾಗಿ ಒಪ್ಪಿ ಅನಂತರ ಹೇರೂರು ಗ್ರಾಮದ ನಿವಾಸಿಯಾದ ಶ್ರೀ ಚನ್ನಬಸವಯ್ಯ, ಆತನ ಪತ್ನಿ ಶ್ರೀಮತಿ ಚನ್ನಮ್ಮ, ಮಗಳು ಶ್ರೀ ಗಂಗಾಭಿಕೆ ಹಾಗೂ ಅವರ ಪತಿ ಶ್ರೀ ಯೋಗೇಶ್ ರವರುಗಳು ಕೂಡಿ ಸದರಿ ಸ್ವತ್ತನ್ನು ತಮ್ಮ ಹೆಸರಿಗೆ ಖಾತಾ ಬದಲಾವಣೆ ಮಾಡಿಸಿ ಕೊಳ್ಳಲು ಶ್ರೀ ಮಂಜುನಾಥ ರವರಿಗೆ ಹಣ ಕೊಟ್ಟು ಸಮ್ಮತಿ ಸೂಚಿಸಿ ತೊಂದರೆ ನೀಡಿರುವುದಾಗಿ ಹೇಳಿದ್ದಾರೆ.

ಆದರೆ ಗ್ರಾಮ ಪಂಚಾಯಿತಿ ಕಛೇರಿ ದಾಖಲೆಗಳ ಪ್ರಕಾರ ಸದರಿ ಸ್ವತ್ತುಗಳು ದೂರುದಾರರ ಪತಿ ಶ್ರೀ ಹುಚ್ಚೇಗೌಡರ ಹೆಸರಿನಲ್ಲಿದ್ದು, ಇವರು ಮೃತಪಟ್ಟಿದ್ದು, ಪತಿ ವಾರಸು ದಾರರ ಆಧಾರದ ಮೇಲೆ ಸೂಕ್ತ ದಾಖಲೆಗಳನ್ನು ಪಡೆದು ದೂರುದಾರರ ಹೆಸರಿಗೆ ಕರ್ನಾಟಕ ಭೂ ಕಂದಾಯ ಅಧಿನಿಯಮ ಕಲಂ 128 ರಡಿ ಕ್ರಮ ಜರುಗಿಸಿ ಖಾತಾ ಬದಲಾವಣೆ ಮಾಡಬೇಕಾಗಿತ್ತು. ಸದರಿ ಸ್ವತ್ತುಗಳು 2013-14ನೇ ಸಾಲಿನಲ್ಲಿ ಸಹ ಶ್ರೀಮತಿ ಶಿವಮ್ಮನವರ ದೂರುದಾರರ ಪತಿಯ ಹೆಸರಿನಲ್ಲಿ ಇದ್ದು, ಸದರಿ ದಾಖಲೆಗಳ ಆಧಾರದ ಮೇಲೆ ಶ್ರೀಮತಿ ಶಿವಮ್ಮನವರ ಹೆಸರಿಗೆ ಖಾತಾ ಬದಲಾವಣೆ ಮಾಡದೇ ದಿನಾಂಕ:20.02.2015 ರಂದು ದೂರುದಾರರು ಸಲ್ಲಿಸಿರುವ ಅರ್ಜಿಯನ್ನು ಕಾನೂನು ರೀತಿ ಪರಿಗಣಿಸದೇ ಬೇಜವಾಬ್ದಾರಿತನದಿಂದ ವರ್ತಿಸಿ ಕರ್ತವ್ಯಲೋಪವೆಸಗಿ ಸರ್ಕಾರಿ ನೌಕರರಿಗೆ ಉಚಿತವಲ್ಲದ ರೀತಿಯಲ್ಲಿ ನಡೆದುಕೊಂಡು ದುರ್ನಡತೆಯಿಂದ ವರ್ತಿಸಿ ಕರ್ನಾಟಕ ನಾಗರೀಕ ಸೇವಾ ನಿಯಮಗಳು (ನಡತೆ) 1966 ರ ನಿಯಮ 3(1) (i) ರಿಂದ (iii) ರಡಿಯಲ್ಲಿ ದುರ್ನಡತೆಯನ್ನೆಸಗಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (2) ರಲ್ಲಿ ಅಪರ ನಿಬಂಧಕರು ವಿಚಾರಣೆಗಳು-10, ಕರ್ನಾಟಕ ಲೋಕಾಯುಕ್ತ ಇವರು ಸದರಿಯವರ ವಿರುದ್ಧ ಈ ಮೇಲ್ಕಂಡ ಆರೋಪದ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿ, ಆರೋಪವು ಸಾಬೀತಾಗಿದೆಯೆಂದು ನಿರ್ಣಯಿಸಿರುತ್ತಾರೆ. ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ ವಿಚಾರಣಾಧಿಕಾರಿರವರ ವರದಿಯನ್ನು ಮಾನ್ಯ ಉಪಲೋಕಾಯುಕ್ತರು ಅಂಗೀಕರಿಸಿ ಸದರಿಯವರ ವಿರುದ್ಧದ ಕರ್ತವ್ಯಲೋಪ ಆರೋಪವು ಸಾಬೀತಾಗಿರುವುದರಿಂದ ಇವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮ 1957 ರ ನಿಯಮದಡಿ ನಿರ್ಧಿಷ್ಟಪಡಿಸಿದಂತೆ **"ನಾಲ್ಕು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮಗಳೊಂದಿಗೆ ತಡೆಹಿಡಿಯುವ"** ದಂಡನೆ ವಿಧಿಸಲು ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4) ರಲ್ಲಿ ಶ್ರೀ ಮಂಜುನಾಥ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಅಮ್ಮನಘಟ್ಟ ಗ್ರಾಮ ಪಂಚಾಯಿತಿ, ಗುಬ್ಬಿ ತಾಲ್ಲೂಕು, ತುಮಕೂರು ಜಿಲ್ಲೆ ಇವರಿಗೆ ನಿಯಮಾನುಸಾರ ಸರ್ಕಾರದ ಪತ್ರದಲ್ಲಿ ವಿಚಾರಣಾಧಿಕಾರಿಯವರ ವರದಿ ಮತ್ತು ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನ ಪ್ರತಿಯೊಂದಿಗೆ ಎರಡನೇ ಕಾರಣ ಕೇಳುವ ನೋಟೀಸ್ಸನ್ನು ಜಾರಿಗೊಳಿಸಲಾಗಿರುತ್ತದೆ. ಮೇಲೆ ಓದಲಾದ ಕ್ರಮ ಸಂಖ್ಯೆ (5) ರಲ್ಲಿ ಎರಡನೇ ಕಾರಣ ಕೇಳುವ ನೋಟೀಸ್ಸಿಗೆ ಕೆಳಗಿನಂತೆ ಸಮಜಾಯಿಷಿಯನ್ನು ಸಲ್ಲಿಸಿರುತ್ತಾರೆ.

ಆರೋಪ ಪಟ್ಟಿಯಲ್ಲಿ ತಿಳಿಸಿರುವಂತೆ ತಾವು ಯಾವುದೇ ಅವ್ಯವಹಾರ ಮಾಡಿರುವುದಿಲ್ಲ. ಅರ್ಜಿದಾರರು ದಿನಾಂಕ:20.02.2015 ರಂದು ಕೊಟ್ಟಿರುವ ಮನವಿಯ ಬಗ್ಗೆ ನಿಯಮಾನುಸಾರ ಪರಿಶೀಲಿಸಿ ಕ್ರಮವಹಿಸಿದ್ದು, ತಾವು ಯಾವುದೇ ವಿಳಂಬಕ್ಕೆ ಕಾರಣರಾಗಿರುವುದಿಲ್ಲ. ಕರ್ನಾಟಕ ಭೂ ಕಂದಾಯ ಕಾಯ್ದೆ 1964 ರ ಪ್ರಕರಣ 152 ಮತ್ತು ಇದರಡಿ ರಚಿತವಾದ ಭೂ ಕಂದಾಯ ನಿಯಮಾವಳಿ 1996 ರ ಅಧ್ಯಾಯ 12 ರಡಿಯಲ್ಲಿ ತಿಳಿಸಿರುವಂತೆ ಕೃಷಿಯೇತರ ಜಮೀನಿನಲ್ಲಿರುವ ಆಸ್ತಿಗಳಿಗೆ ಸಂಬಂಧಿಸಿದಂತೆ ಕಂದಾಯ ಇಲಾಖೆಯ ಭೂ ಮಾಪನ ಮತ್ತು ಭೂ ದಾಖಲೆಗಳ ಇಲಾಖೆಯು ಪಟ್ಟಣಗಳಾಗಲ್ಲಿ, ನಗರಗಳಾಗಲ್ಲಿ, ಈ ಕರ್ತವ್ಯವನ್ನು ನಿರ್ವಹಿಸುವ ಜವಾಬ್ದಾರಿಯನ್ನು ಹೊಂದಿರುತ್ತದೆ. ಆದ್ದರಿಂದ ಕೃಷಿಯೇತರ ಜಮೀನಿನಲ್ಲಿರುವ ಆಸ್ತಿಗಳಿಗೆ ಸಂಬಂಧಿಸಿದಂತೆ ದಾಖಲೆಗಳನ್ನು ಕಂದಾಯ ಇಲಾಖೆ ನಿರ್ವಹಿಸಬೇಕಾಗಿರುತ್ತದೆ. ಇದರ ಉಸ್ತುವಾರಿಯನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಗೆ ಹಸ್ತಾಂತರಿಸಿರುವುದಿಲ್ಲ. ಸರ್ಕಾರದ ಸುತ್ತೋಲೆಯಲ್ಲಿ ಗ್ರಾಮ ಪಂಚಾಯಿತಿಗಳು ನಾಗರೀಕರ ಗ್ರಾಮಠಾಣಾ ಆಸ್ತಿಯೆಂದು ಹೇಳಿ ಅದಕ್ಕೆ ಸಂಬಂಧಪಟ್ಟಂತೆ ನಮೂನೆ-9 ಕೋರಿದಾಗ, ಸದರಿ ಸ್ವತ್ತು ಗ್ರಾಮಠಾಣಾಯೊಳಗೆ ಬರುತ್ತದೆಯೋ ಅಥವಾ ಇಲ್ಲವೋ ಎಂದು ದೃಢೀಕರಿಸಲು ಗ್ರಾಮ ಪಂಚಾಯಿತಿಗೆ ಯಾವುದೇ ಅಧಿಕಾರ ಇರುವುದಿಲ್ಲ. ಕರ್ನಾಟಕ ಭೂ ಕಂದಾಯ ಕಾಯ್ದೆ 1964 ರ ಪ್ರಕರಣ 62 ರಡಿಯಲ್ಲಿ ಗ್ರಾಮ ಲೆಕ್ಕಾಧಿಕಾರಿಗಳಿಗೆ ಎಲ್ಲಾ ಆಸ್ತಿ ಮತ್ತು ಭೂ ದಾಖಲೆಗಳನ್ನು ನಿರ್ವಹಣಾ ಮಾಡುವ ಅಧಿಕಾರ ನೀಡಲಾಗಿರುತ್ತದೆ. ಮುಂದುವರೆದು ಗ್ರಾಮಠಾಣಾದೊಳಗೆ ಆಸ್ತಿ ಬರುತ್ತದೆಯೋ ಅಥವಾ ಇಲ್ಲವೋ ಎಂಬುದನ್ನು ದೃಢೀಕರಿಸಿ ಸ್ವತ್ತಿನ ನಕಾಶೆ ಮತ್ತು ಚೆಕ್ ಬಂದಿಯೊಂದಿಗೆ ನೀಡಲು ಸಂಬಂಧಪಟ್ಟ ತಹಶೀಲ್ದಾರರಿಗೆ ಕೋರಿಕೆ ಸಲ್ಲಿಸಿ ಪಡೆಯಬೇಕಾಗಿರುತ್ತದೆ.

ಗ್ರಾಮ ಪಂಚಾಯಿತಿಗಳು ಯಾವುದೇ ಕಾರಣಕ್ಕೂ ಕಂದಾಯ ಇಲಾಖೆಯ ತಹಶೀಲ್ದಾರ್ ರವರಿಂದ ಗ್ರಾಮಠಾಣಾ ವ್ಯಾಪ್ತಿಯೊಳಗಿನ ಆಸ್ತಿಗೆ ಸಂಬಂಧಿಸಿದ ಸ್ವತ್ತಿನ ವಿವರವನ್ನು ಅನುಬಂಧ-2 ರಲ್ಲಿರುವಂತೆ ಪಡೆಯದೇ ನಮೂನೆ-9 ಅನ್ನು ನೀಡತಕ್ಕದ್ದಲ್ಲ. ಈ ಅಂಶವನ್ನು ವಿಚಾರಣಾಧಿಕಾರಿಗಳು ತಮ್ಮ ಹೇಳಿಕೆಯನ್ನು ಪರಿಶೀಲಿಸದೇ ವರದಿ ನೀಡಿರುತ್ತಾರೆ.

ಸರ್ಕಾರವು ಆಪಾದಿತರು 2ನೇ ಕಾರಣ ಕೇಳುವ ನೋಟೀಸಿಗೆ ನೀಡಿರುವ ಲಿಖಿತ ಹೇಳಿಕೆ ಮತ್ತು ವಿಚಾರಣಾ ನಡವಳಿ, ದಾಖಲೆಗಳು ಮತ್ತು ಸಾಕ್ಷ್ಯಾಧಾರಗಳನ್ನು ವಿವರವಾಗಿ ಪರಿಶೀಲಿಸಿದೆ. ಸದರಿ ಪ್ರಕರಣದಲ್ಲಿ ವಿಚಾರಣಾಧಿಕಾರಿಯವರು ವಿವರವಾದ ಸಮರ್ಥನೆಯೊಂದಿಗೆ ಆರೋಪಿತ ಅಧಿಕಾರಿಗಳ ವಿರುದ್ಧದ ಆರೋಪವನ್ನು ಸಾಬೀತುಪಡಿಸಿರುತ್ತಾರೆ. ಆರೋಪದ ತೀವ್ರತೆಗೆ ಅನುಗುಣವಾಗಿ ಮಾನ್ಯ ಉಪಲೋಕಾಯುಕ್ತರು ಶ್ರೀ ಮಂಜುನಾಥ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಇವರಿಗೆ ಕರ್ನಾಟಕ

ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 8(iii) ರನ್ವಯ **"ನಾಲ್ಕು ವಾರ್ಷಿಕ ವೇತನ ಶ್ರೇಣಿಗಳನ್ನು ಹತ್ತು ವರ್ಷಗಳ ಅವಧಿಗೆ ತಡೆಹಿಡಿಯುವ" (With cumulative effect)** ದಂಡನೆ ವಿಧಿಸಲು ಸರ್ಕಾರವು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/437/ಗ್ರಾಪಂಕಾ/2017**
**ಬೆಂಗಳೂರು, ದಿನಾಂಕ:06-03-2020.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಮಂಜುನಾಥ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಅಮ್ಮನಘಟ್ಟ ಗ್ರಾಮ ಪಂಚಾಯಿತಿ, ಗುಬ್ಬಿ ತಾಲ್ಲೂಕು, ತುಮಕೂರು ಜಿಲ್ಲೆ ರವರ ವಿರುದ್ಧದ ಆರೋಪಗಳು ಸಾಬೀತಾಗಿರುವುದರಿಂದ ಇವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 8(iii) ರನ್ವಯ **"ನಾಲ್ಕು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮಗಳೊಂದಿಗೆ ತಡೆಹಿಡಿಯುವ" (With cumulative effect)** ದಂಡನೆ ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

B. Naveenkumar 06/03/2020
(ನವೀನ್‌ಕುಮಾರ್ ಬಿ.)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,(ಗ್ರಾ.ಪಂ.)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ತುಮಕೂರು ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ ಗುಬ್ಬಿ, ತುಮಕೂರು ಜಿಲ್ಲೆ.
6. ಶ್ರೀ ಮಂಜುನಾಥ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಅಮ್ಮನಘಟ್ಟ ಗ್ರಾಮ ಪಂಚಾಯಿತಿ, ಗುಬ್ಬಿ ತಾಲ್ಲೂಕು, ತುಮಕೂರು ಜಿಲ್ಲೆ.
7. ಗಣಕ ಕೋಶ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

(70)